# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮತ್ಸ್ಯಾಶ್ರಯ ಯೋಜನೆಯಡಿ ಮಂಜೂರಾದ ಮನೆಗಳಿಗೆ ಸಂಬಂಧಿಸಿದಂತೆ ಫಲಾನುಭವಿಗಳನ್ನು ಜಿಲ್ಲಾ ಮಟ್ಟದ ಅಧಿಕಾರಿಗಳು ಅನುಮೋದಿಸುವ ಬಗ್ಗೆ.

ಓದಲಾಗಿದೆ:- ಮೀನುಗಾರಿಕೆ ನಿರ್ದೇಶಕರ ಪತ್ರ ಸಂಖ್ಯೆ: DOFTECORAMK/60/2021, ದಿನಾಂಕ: 06-05-2021.

******

## ಪ್ರಸ್ತಾವನೆ:

ಮೇಲೆ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, ಮತ್ಸ್ಯಾಶ್ರಯ ಯೋಜನೆಯಡಿ ನಿರ್ವಸಿತ ಮೀನುಗಾರರ ಅರ್ಹ ಫಲಾನುಭವಿಗಳಿಗೆ ಹಲವು ವರ್ಷಗಳಿಂದ ಮತ್ಸ್ಯಾಶ್ರಯ ಯೋಜನೆಯಡಿ ಸ್ವಂತ ಖಾಲಿ ನಿವೇಶನ ಹೊಂದಿರುವ ಅಥವಾ ಗುಡಿಸಲು/ಶಿಥಿಲಗೊಂಡ ಮನೆಯಲ್ಲಿ ವಾಸಿಸುತ್ತಿರುವ ಮೀನುಗಾರರಿಗೆ ಅರ್ಹತೆ ಮೇರೆಗೆ ಆಯ್ಕೆ ಸಮಿತಿ ಮೂಲಕ ವಸತಿ ಸೌಕರ್ಯ ಒದಗಿಸಲಾಗುತ್ತಿದೆ.

ಆಯ್ಕೆ ಸಮಿತಿಯಲ್ಲಿ ಆಯಾ ವಿಧಾನಸಭಾ ಕ್ಷೇತ್ರದ ಶಾಸಕರು- ಅಧ್ಯಕ್ಷರು, ವಿಧಾನ ಪರಿಷತ್ ಸದಸ್ಯರು-ಸದಸ್ಯರು (ಅವರ ವ್ಯಾಪ್ತಿಯ ಅಪೇಕ್ಷಿಸಿದ ಯಾವುದಾದರೊಂದು ವಿಧಾನಸಭಾ ಕ್ಷೇತ್ರಕ್ಕೆ ಸೀಮಿತವಾದಂತೆ) ಮತ್ತು ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇಣಿ-2) - ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀನುಗಾರರಿಗೆ ಅನುಕ್ರಮವಾಗಿ ಶೇ.17.15 ರಷ್ಟು ಹಾಗೂ ಶೇ. 6.95 ರಷ್ಟು ಮನೆಗಳನ್ನು ಮೀಸಲಿರಿಸಲಾಗಿದೆ. ಕನಿಷ್ಟ ಶೇ. 30 ರಷ್ಟು ಮನೆಗಳನ್ನು ಮೀನುಗಾರ ಮಹಿಳೆಯರಿಗೆ/ಗಂಡ-ಹೆಂಡತಿಗೆ ಜಂಟಿಯಾಗಿ ನೀಡಲು ನಿಗದಿಪಡಿಸಿದೆ. ವಸತಿ ಸೌಕರ್ಯವನ್ನು ಪಡೆಯಲು ಫಲಾನುಭವಿಯು ಸಲ್ಲಿಸಬೇಕಾಗಿರುವ ದಾಖಲಾತಿಗಳ ವಿವರ ಈ ಕೆಳಗಿನಂತೆ ಇರುತ್ತದೆ.

1. ವಸತಿಗಾಗಿ ನಿಗದಿಪಡಿಸಿದ ಅರ್ಜಿ
2. ಆದಾಯ ಪ್ರಮಾಣ ಪತ್ರ
3. ಜಾತಿ ಪ್ರಮಾಣ ಪತ್ರ
4. ವಸತಿಯಿಲ್ಲದಿರುವ ಬಗ್ಗೆ ದೃಢೀಕರಣ ಪತ್ರ
5. ಮೀನುಗಾರಿಕೆ ಕ್ಷೇತ್ರದಲ್ಲಿ ತೊಡಗಿರುವ ಬಗ್ಗೆ ದೃಢೀಕರಣ ಪತ್ರ
6. ಸ್ವಂತ ನಿವೇಶನದ ಹಕ್ಕು ದಾಖಲೆಗಳು(ನಮೂನೆ-11 ಖಾತಾ ಇತ್ಯಾದಿ)
7. ಈಗಿರುವ ನಿವೇಶನ/ಗುಡಿಸಲು/ಶಿಥಿಲಗೊಂಡ ಮನೆಯ ಫೋಟೋಗಳು

ಆದೇಶ ಸಂಖ್ಯೆ: ಪಸಂಮೀ/23/ಮೀಇಯೋ/2009, ದಿನಾಂಕ: 2/3/2009ರಲ್ಲಿನ ಅನುಬಂಧ-2 ರಲ್ಲಿ ನಮೂದಿಸಿರುವಂತೆ ಕಾರ್ಯವಿಧಾನವನ್ನು ಅನುಸರಿಸ ಬೇಕಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಆಯ್ಕೆ ಸಮಿತಿಯು ಆಯ್ಕೆ ಮಾಡಿದ ಫಲಾನುಭವಿಗಳ ದಾಖಲಾತಿಗಳನ್ನು ಪರಿಶೀಲಿಸಿ ಮೀನುಗಾರಿಕೆ ನಿರ್ದೇಶಕರು ಫಲಾನುಭವಿಗಳನ್ನು ಅನುಮೋದಿಸಲಾಗುತ್ತಿದೆ. ಅನುಮೋದನೆಗೊಂಡ ಫಲಾನುಭವಿಗಳಿಗೆ ಅನುಷ್ಠಾನ ಸಂಸ್ಥೆಯಾದ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಹೊಯ್ಗೆ ಬಜಾರ, ಮಂಗಳೂರುರವರ ಮೂಲಕ ಮನೆಯ ನಿರ್ಮಾಣದ ಪ್ರಗತಿಗನುಗುಣವಾಗಿ ಹಂತವಾರು ಸಹಾಯಧನ ಬಿಡುಗಡೆ ಮಾಡಲಾಗುತ್ತಿದೆ.

ಆಯ್ಕೆ ಸಮಿತಿಯ ಮೂಲಕ ಆಯ್ಕೆಯಾದ ಫಲಾನುಭವಿಗಳಿಂದ ಮೇಲಿನಂತೆ ದಾಖಲಾತಿಗಳನ್ನು ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇಣಿ-2)ರವರು ಪಡೆದು, ಮೀನುಗಾರಿಕೆ ಹಿರಿಯ ಸಹಾಯಕ ನಿರ್ದೇಶಕರಿಗೆ (ಜಿಲ್ಲಾ ಮಟ್ಟದ ಅಧಿಕಾರಿಗಳು) ಸಲ್ಲಿಸಲಾಗುವುದು. ಜಿಲ್ಲಾ ಮಟ್ಟದ ಅಧಿಕಾರಿಗಳು ಮೀನುಗಾರಿಕೆ ಉಪನಿರ್ದೇಶಕರು (ವಲಯಾಧಿಕಾರಿಗಳು)ರವರಿಗೆ ಸಲ್ಲಿಸಲಾಗುವುದು. ತದನಂತರ ಮೀನುಗಾರಿಕೆ ಉಪ ನಿರ್ದೇಶಕರು ನಿರ್ದೇಶಕರಿಗೆ ಸಲ್ಲಿಸಲಾಗುವುದು. ಈ ರೀತಿಯಾಗಿ 3 ಹಂತಗಳಲ್ಲಿ ಫಲಾನುಭವಿಗಳಿಂದ ಪಡೆದ ದಾಖಲೆಗಳು ಕೇಂದ್ರ ಕಛೇರಿಗೆ ತುಂಬಾ ವಿಳಂಬವಾಗಿ ಸಲ್ಲಿಕೆಯಾಗುತ್ತಿದ್ದು, ಫಲಾನುಭವಿಗಳ ದಾಖಲಾತಿಗಳ ಪರಿಶೀಲನೆಯಲ್ಲಿ ಕೆಲವೊಂದು ಆಕ್ಷೇಪಣೆಗಳು ಕಂಡು ಬಂದಲ್ಲಿ ಪುನಃ ಮೇಲಿನಂತೆ 3 ಹಂತಗಳಲ್ಲಿ ಸಂಬಂಧಪಟ್ಟ ಅಧಿಕಾರಿಗೆ ಹಿಂದಿರುಗಿಸಲಾಗುವುದು ಈ ಹಿನ್ನೆಲೆಯಲ್ಲಿ ಫಲಾನುಭವಿಗಳ ಅನುಮೋದನೆಯಲ್ಲಿ ಸಾಕಷ್ಟು ವಿಳಂಬವಾಗುತ್ತಿದ್ದು ಅನಾವಶ್ಯಕ ಕಾಲಹರಣ ಮಾಡಿದಂತಾಗುವುದು. ಇದರಿಂದ ಫಲಾನುಭವಿಯು ಅನಾವಶ್ಯಕ ತೊಂದರೆಗೊಳಗಾಗಿ ಯೋಜನೆಯ ಉದ್ದೇಶ ಈಡೇರಿದಂತಾಗುವುದಿಲ್ಲ. ಇದರಿಂದ ಪ್ರಗತಿ ಕುಂಟಿತವಾಗುತ್ತಿರುತ್ತದೆ ಎಂದು ತಿಳಿಸಿರುತ್ತಾರೆ.

ಆದ್ದರಿಂದ, ಒಂದು ವೇಳೆ ದಾಖಲಾತಿಗಳಲ್ಲಿ ಆಕ್ಷೇಪಣೆ ಕಂಡುಬಂದಲ್ಲಿ ಸ್ಥಳೀಯವಾಗಿ ಅರ್ಜಿದಾರರಿಂದ ಸೂಕ್ತ ಸಮಯದಲ್ಲಿ ಸಿಕ್ಕಿ ದಾಖಲಾತಿಗಳನ್ನು ಪಡೆಯಲು ಸುಲಭವಾಗುತ್ತದೆ ಹಾಗೂ ಫಲಾನುಭವಿಗಳ ಅನುಮೋದನೆ ತ್ವರಿತಗತಿಯಲ್ಲಿ ಸಾಗಲು ಅನುಕೂಲವಾಗಿ ಫಲಾನುಭವಿಯು ಮನೆಯ ನಿರ್ಮಾಣವನ್ನು ಪ್ರಾರಂಭಿಸಲು ಅನುಕೂಲವಾಗುವುದು ಇದರಿಂದ ಯೋಜನೆಯ ಉದ್ದೇಶ ಸಫಲವಾಗುತ್ತದೆ. ಆದ್ದರಿಂದ ಮೇಲಿನ ಕಾರಣಗಳಿಂದ ಫಲಾನುಭವಿಯ ಅನುಮೋದನೆಯಲ್ಲಿ ಆಗುವ ಅನಾವಶ್ಯಕ ವಿಳಂಬವನ್ನು ತಡೆಗಟ್ಟುವ ಉದ್ದೇಶದಿಂದ ಜಿಲ್ಲಾ ಮಟ್ಟದ ಅಧಿಕಾರಿಗಳೇ ಸಂಖ್ಯೆ:ಪಸಂಮೀ/23/ಮೀಇಯೋ/2009, ದಿನಾಂಕ: 02-03-2009ರ ಆದೇಶದ ಅನುಬಂಧ-2 ರಲ್ಲಿ ನಮೂದಿಸಿರುವ ಷರತ್ತುಗಳಿಗೆ ಒಳಪಟ್ಟು ಫಲಾನುಭವಿಗಳ ಅನುಮೋದನೆ ನೀಡುವುದು ಸೂಕ್ತವಾಗಿರುತ್ತದೆ ಎಂದು ಅಭಿಪ್ರಾಯಪಡುತ್ತಾ, ಆದೇಶ ಹೊರಡಿಸಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-177 ಮೀಇಯೋ 2021, ಬೆಂಗಳೂರು**
**ದಿನಾಂಕ: 16-06-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮತ್ಸ್ಯಾಶ್ರಯ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ಸದರಿ ಯೋಜನೆಯ ಫಲಾನುಭವಿಗಳ ಆಯ್ಕೆಯನ್ನು ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/23/ಮೀಇಯೋ/2009, ದಿನಾಂಕ: 02/03/2009ರ ಅನುಬಂಧ-2 ರಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಮೀನುಗಾರಿಕೆ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಅನುಮೋದಿಸಲು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

Kamakshi U.A.
(ಕಾಮಾಕ್ಷಿ ಯು.ಎ.) 16/6/21
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

16/06/2021

**ಇವರಿಗೆ**

1) ಪ್ರಧಾನ ಮಹಾಲೇಖಪಾಲರು (ಜಿ॰ಎಸ್‌ಎಸ್‌ಎ)(ಇ॰ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ॰ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಹೊಯಿಗೆ ಬಜಾರ್, ಮಂಗಳೂರು.
5) ಸಂಬಂಧಿಸಿದ ಎಲ್ಲಾ ವಿಧಾನಸಭಾ / ವಿಧಾನ ಪರಿಷತ್ ಸದಸ್ಯರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
6) ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
7) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಮ್ / ಹೆಚ್ಚುವರಿ ಪ್ರತಿಗಳು.